

# ಕ್ರೈಂ ಆ್ಯಕ್ಷನ್‌ಗೆ ಸೈ ಎಂದ ಕಿರಣ್ ರಾಜ್

ಕಿರುತೆರೆ, ಹಿರಿತೆರೆ ಎರಡರಲ್ಲೂ ತೊಡಗಿಕೊಂಡಿರುವ ನಟ ಕಿರಣ್ ರಾಜ್ ಅಭಿನಯದ ಹೊಸ ಸಿನಿಮಾ ತೆರೆಗೆ ಬರಲು ಸಜ್ಜಾಗಿದ್ದು, ವಿಭಿನ್ನ ಪಾತ್ರದ ಮೂಲಕ ಜನರ ಮುಂದೆ ಬರುತ್ತಿರುವುದಾಗಿ ಹೇಳಿದ್ದಾರೆ.

‘ಕನ್ನಡತಿ’ ಧಾರಾವಾಹಿ ಮೂಲಕ ಮನೆ ಮಾತಾದ ನಟ ಕಿರಣ್ ರಾಜ್, ‘ಕರ್ಣ’ ಧಾರಾವಾಹಿಯಲ್ಲಿಯೂ ತೊಡಗಿಕೊಂಡಿದ್ದಾರೆ. ಈ ನಡುವೆ ಅವರು ಅಭಿನಯಿಸಿರುವ ‘ಶೇರ್’ ಸಿನಿಮಾ ಕೂಡ ಮೇ 15ಕ್ಕೆ ಬಿಡುಗಡೆಯಾಗುತ್ತಿದೆ. ಇದರಲ್ಲಿ ಅನಾಥ ಯುವಕನ ಪಾತ್ರದಲ್ಲಿ ಕಿರಣ್ ಕಾಣಿಸಿಕೊಳ್ಳುತ್ತಿದ್ದಾರೆ. ಪ್ರಸಿದ್ಧ್ ನಿರ್ದೇಶನದಲ್ಲಿ ಈ ಸಿನಿಮಾ ಮೂಡಿಬಂದಿದೆ. ‘ನಿರ್ದೇಶಕ ಪ್ರಸಿದ್ಧ್ ಅವರು ನನ್ನನ್ನು ಆ್ಯಕ್ಷನ್ ಹೀರೊ ಆಗಿ ಪರಿಚಯ ಮಾಡಿಸಿದ್ದರು. ಈ ಚಿತ್ರದಲ್ಲಿ ಅನಾಥ ಹುಡುಗನಾಗಿ ನಟಿಸಿದ್ದೇನೆ. ಇದೊಂದು ಕ್ರೈಮ್ ಆಕ್ಷನ್ ಥ್ರಿಲ್ಲರ್ ಚಿತ್ರ’ ಎಂದು ಮಾಹಿತಿ ನೀಡಿದ್ದಾರೆ ಕಿರಣ್ ರಾಜ್.

‘ಇದು ನನ್ನ ಮೂರನೇ ಸಿನಿಮಾ’ ಎಂದು ಮಾತು ಆರಂಭಿಸಿದ ಪ್ರಸಿದ್ಧ್, ‘ಕಿರಣ್ ರಾಜ್ ಅವರು ಈವರೆಗೂ ಮಾಡಿರದ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಕ್ರೈಂ ಸಸ್ಪೆನ್ಸ್ ಜಾನರ್‌ನಲ್ಲಿ ಸಿನಿಮಾವಿದೆ. ಅನಾಥ ಮಕ್ಕಳ ಜೀವನದಲ್ಲಿ ಏನೇನೆಲ್ಲಾ ಆಗುತ್ತದೆ ಎಂಬುದನ್ನು ಚಿತ್ರದಲ್ಲಿ ಹೇಳಲಾಗಿದೆ. ನಿರ್ಮಾಪಕರ ಪುತ್ರ ಕ್ರಿಶ್ ರಾಡ್ರಿಗ್ ವಿಲನ್ ಪಾತ್ರದಲ್ಲಿ ನಟಿಸಿದ್ದಾರೆ. ತನಿಷಾ ಕುಪ್ಪಂಡ ಅವರು ಪೊಲೀಸ್ ಅಧಿಕಾರಿಯಾಗಿ ಕಾಣಿಸಿಕೊಂಡಿದ್ದಾರೆ’ ಎಂದು ಮಾಹಿತಿ ನೀಡಿದ್ದಾರೆ.

# ದುನಿಯಾ ವಿಜಿ ಮಾಸ್ ಅಪೀಲ್

ನಟ ದುನಿಯಾ ವಿಜಯ್ ಹಾಗೂ ನಿರ್ದೇಶಕ ನರ್ತನ್ ಜೊತೆ ಸಹಾಯಕ ನಿರ್ದೇಶಕನಾಗಿ ಕೆಲಸ ಮಾಡಿದ್ದ ವೀರ ದೇವರಾಜ್ ನಿರ್ದೇಶನಕ್ಕೆ ಅಡಿಯಿಟ್ಟಿದ್ದು, ಅವರ ಮೊದಲ ಸಿನಿಮಾದಲ್ಲಿ ದುನಿಯಾ ವಿಜಯ್ ಅವರೇ ನಾಯಕ ನಟರಾಗಿದ್ದಾರೆ.

‘ಭೀಮಾ’, ‘ಸಿಟಿ ಲೈಟ್ಸ್’ ಸಿನಿಮಾದಲ್ಲಿ ದೇವರಾಜ್, ದುನಿಯಾ ವಿಜಿ ಅವರಿಗೆ ಸಹಾಯಕ ನಿರ್ದೇಶಕರಾಗಿದ್ದರು. ನಿರ್ದೇಶಕ ನರ್ತನ್ ಅವರೊಂದಿಗೆ ‘ಮಫ್ತಿ’, ‘ಭೈರತಿ ರಣಗಲ್’ ಸಿನಿಮಾದಲ್ಲಿಯೂ ಕೆಲಸ ಮಾಡಿದ್ದರು. ಇದೀಗ ತಮ್ಮ ಚೊಚ್ಚಲ ನಿರ್ದೇಶನದ ಸಿನಿಮಾದಲ್ಲಿ ವಿಜಯ್ ಅವರಿಗೆ ಮಾಸ್ ಅಪೀಲ್ ನೀಡಲು ಸಜ್ಜಾಗಿದ್ದಾರೆ.

ಕಳೆದ ಎಂಟು ತಿಂಗಳಿನಿಂದ ಈ ಸಿನಿಮಾದ ತಯಾರಿ ನಡೆಯುತ್ತಿದೆ. ‘ಲ್ಯಾಂಡ್‌ಲಾರ್ಡ್’ ನಂತರ ವಿಜಯ್ ನಟಿಸುತ್ತಿರುವ ಸಿನಿಮಾ ಇದಾಗಿದೆ. ಕನ್ನಡ ಸಿನಿಮಾದಿಂದಾಚೆಗೂ ವಿಜಯ್ ಸಾಗುತ್ತಿದ್ದು, ‘ಮೂಕುತಿ ಅಮ್ಮನ್ 2’ ಸಿನಿಮಾ ಬಿಡುಗಡೆಗೆ ಎದುರು ನೋಡುತ್ತಿದ್ದಾರೆ. ವಿಜಯ್ ಸೇತುಪತಿ ಜೊತೆ ‘ಸ್ಲಂ ಡಾಗ್’ ಸಿನಿಮಾ ಚಿತ್ರೀಕರಣವನ್ನೂ ಪೂರ್ಣಗೊಳಿಸಿದ್ದಾರೆ. ತಮ್ಮ ನಿರ್ದೇಶನದ ಮೂರನೇ ಸಿನಿಮಾ ‘ಸಿಟಿ ಲೈಟ್ ಅನ್ನು ಬಿಡುಗಡೆಗೊಳಿಸುವ ತಯಾರಿಯಲ್ಲಿದ್ದಾರೆ.

ಮಾಸ್ ಕಮರ್ಷಿಯಲ್ ಎಂಟರ್‌ಟೇನರ್ ಸಿನಿಮಾ ಇದಾಗಿದ್ದು, ಕೌಟುಂಬಿಕ ಹಾಗೂ ಆ್ಯಕ್ಷನ್ ಅಂಶಗಳಿಂದ ಕೂಡಿದೆ. ವಿಜಯ್ ಆನ್‌ಸ್ಕ್ರೀನ್ ಇಮೇಜ್ ಮೇಲೆ ಹೆಚ್ಚು ಕೆಲಸ ಮಾಡಲಾಗಿದೆ ಎಂದು ವೀರ ದೇವರಾಜ್ ತಿಳಿಸಿದ್ದಾರೆ.



# ಹೆಬಾ ಕಂಬ್ಯಾಕ್

ಶರಣ್ ನಟನೆಯ ‘ಅಧ್ಯಕ್ಷ’ ಸಿನಿಮಾ ಮೂಲಕ ಕನ್ನಡ ಚಿತ್ರರಂಗಕ್ಕೆ ಪದಾರ್ಪಣೆ ಮಾಡಿದ್ದ ನಟಿ ಹೆಬಾ ಪಟೇಲ್ ಈಗ ದಿಗಂತ್ ಅಭಿನಯದ ‘ರುದ್ರಕಾಲ’ ಸಿನಿಮಾದಲ್ಲಿ ನಟಿಸುತ್ತಿದ್ದಾರೆ.

‘ಅಧ್ಯಕ್ಷ’ ಸಿನಿಮಾ ನಂತರ ತಮಿಳು, ತೆಲುಗು ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದ ಹೆಬಾ, ಹಲವು ವರ್ಷಗಳ ನಂತರ ಕನ್ನಡ ಸಿನಿಮಾಗಳಲ್ಲಿ ಕಾಣಿಸಿಕೊಳ್ಳುತ್ತಿದ್ದು, ಬಿ.ಎಂ. ಗಿರಿರಾಜ್ ನಿರ್ದೇಶನದ ‘ರಾಮರಸ’ ಸಿನಿಮಾದಲ್ಲಿಯೂ ನಟಿಸುತ್ತಿದ್ದಾರೆ. ಈ ನಡುವೆಯೇ ‘ರುದ್ರಕಾಲ’ ಸಿನಿಮಾಗೆ ಒಪ್ಪಿಕೊಂಡಿದ್ದಾರೆ.

ಸಿನಿಮಾ ಕುರಿತು ಮಾತನಾಡಿರುವ ಹೆಬಾ, ‘‘ನನ್ನ ಸಿನಿಪಯಣವನ್ನು ಆರಂಭಿಸಿದ್ದೇ ಕನ್ನಡ ಸಿನಿಮಾರಂಗದಲ್ಲಿ. ಸುಮಾರು ಹತ್ತು ವರ್ಷಗಳ ಬಳಿಕ ಮತ್ತೆ ಇಲ್ಲಿಗೆ ಮರಳಿದ್ದೇನೆ. ‘ಅಧ್ಯಕ್ಷ’ ಸಿನಿಮಾಗೆ ಕನ್ನಡ ಜನತೆ ನೀಡಿದ ಪ್ರೀತಿ ಮರೆಯುವಂತಿಲ್ಲ. ದಿಗಂತ್ ಅವರ ಜೊತೆ ನಟಿಸುವ ಆಸೆ ಇತ್ತು. ಇದು ಈಗ ನನಸಾಗಿದೆ’’ ಎಂದು ಖುಷಿಯನ್ನು ಹಂಚಿಕೊಂಡಿದ್ದಾರೆ.

‘ರುದ್ರಕಾಲ’ ಸಿನಿಮಾ, ಕನ್ನಡ ಹಾಗೂ ತೆಲುಗು ಭಾಷೆಯಲ್ಲಿ ಏಕಕಾಲಕ್ಕೆ ಚಿತ್ರೀಕರಣಗೊಳ್ಳುತ್ತಿದೆ. ಗೋಪಿ ನಿರ್ದೇಶಿಸುತ್ತಿರುವ ಈ ಸಿನಿಮಾದಲ್ಲಿ ಹೆಬಾ, ದಿಗಂತ್ ಅವರಿಗೆ ಜೋಡಿಯಾಗಿ ನಟಿಸುತ್ತಿದ್ದಾರೆ.

